# ದಕ್ಷಿಣ ಕನ್ನಡ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಮಂಗಳೂರು

**ಅಧಿಸೂಚನೆ ಸಂಖ್ಯೆ: ಎಡಿಎಂಎನ್/16664/2023**

**ದಿನಾಂಕ: 25ನೇ ಅಕ್ಟೋಬರ್ ಮಾಹೆ 2023**

***

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 06.11.2023 ರಿಂದ**

**ಕಡೆಯ ದಿನಾಂಕ: 05.12.2023**

**ಸಮಯ: ರಾತ್ರಿ 11.59 ಗಂಟೆಯವರೆಗೆ ಹಾಗೂ ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಕಡೆಯ ದಿನಾಂಕ: 06.12.2023**

ವಿಷಯ: ಶೀಘ್ರಲಿಪಿಗಾರರು (Stenographer Grade – III), ಬೆರಳಚ್ಚುಗಾರರು (Typist), ಬೆರಳಚ್ಚು-ನಕಲುಗಾರರು (Typist-Copyist) ಮತ್ತು **ಜವಾನ** (Peon) ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖ: ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ DJA-II (LCA-II-128/2012) ದಿನಾಂಕ: 27.01.2022 ಮತ್ತು 11.09.2023

***

ಮಂಗಳೂರಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು (Stenographer Grade – III) - **10,** ಬೆರಳಚ್ಚುಗಾರರು (Typist) – **06,** ಬೆರಳಚ್ಚು-ನಕಲುಗಾರರು (Typist-Copyist) – **02** ಮತ್ತು **ಜವಾನ - 36 ಹುದ್ದೆಗಳಿಗೆ** ಅರ್ಹ ಅಭ್ಯರ್ಥಿಗಳಿಂದ **ಆನ್‌ಲೈನ್ ಮುಖಾಂತರ** ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ದಕ್ಷಿಣ ಕನ್ನಡ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://dk.dcourts.gov.in/notice-category/recruitments** ನಲ್ಲಿ ನೀಡಲಾದ ಲಿಂಕ್ ಮುಖಾಂತರ **ಆನ್‌ಲೈನ್‌ನಲ್ಲಿ** ದಿನಾಂಕ: **06.11.2023** ರಿಂದ ದಿನಾಂಕ: **05.12.2023** ರ ರಾತ್ರಿ **11.59** ಗಂಟೆಯವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ನಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**1. ಶೀಘ್ರಲಿಪಿಗಾರರು (Stenographer Grade – III) :- ಹುದ್ದೆಗಳ ಸಂಖ್ಯೆ - 10**

**ವೇತನ** ಶ್ರೇಣಿ: 27650-650-29600-750-32600-850-36000-950-39800-1100-46400-1250-52650

**ಹುದ್ದೆಗಳ ವರ್ಗೀಕರಣಃ-**

| ವರ್ಗ | ಇತರೆ | ಗ್ರಾಮೀಣ | ಮಹಿಳೆ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| ಸಾ. ಅ. | 1 | 1 | 2 | -- | 1* | -- | -- | -- | 5 |
| ಪ್ರವರ್ಗ-I | 1 | -- | -- | -- | -- | -- | -- | -- | 1 |
| ಪ್ರವರ್ಗ- II ಎ | 1 | -- | -- | -- | -- | -- | -- | -- | 1 |
| ಪ್ರವರ್ಗ- II ಬಿ | -- | -- | -- | -- | -- | -- | -- | -- | -- |
| ಪ್ರವರ್ಗ- IIIಎ | -- | -- | -- | -- | -- | -- | -- | -- | -- |
| ಪ್ರವರ್ಗ-III ಬಿ | -- | -- | -- | -- | -- | -- | -- | -- | -- |
| ಪ.ಜಾ. | 1 | -- | 1 | -- | -- | -- | -- | -- | 2 |
| ಪ. ಪಂ. | 1 | -- | -- | -- | -- | -- | -- | -- | 1 |
| ಒಟ್ಟು | **5** | **1** | **3** | **--** | **1** | **--** | **--** | **--** | **10** |

* **ಚಿಹ್ನೆ ತೋರಿಸಿರುವ ಹುದ್ದೆಗಳು ದೃಷ್ಟಿ ಮಾಂದ್ಯ (Low vision) ಅಂಗವಿಕಲ ಅಭ್ಯರ್ಥಿಗಳಿಗೆ ಮಾತ್ರ ಮೀಸಲಾಗಿದೆ.**

**ಶೈಕ್ಷಣಿಕ ವಿದ್ಯಾರ್ಹತೆ :**

(ಎ) ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ವರ್ಷದ ಪದವಿ ಪೂರ್ವ ಶಿಕ್ಷಣ ಕೋರ್ಸಿನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರ್ಯಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

(ಬಿ) ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿಯಲ್ಲಿ ಹಿರಿಯ ದರ್ಜೆ (ಸೀನಿಯರ್ ಗ್ರೇಡ್) ಮತ್ತು ಕನ್ನಡ ಹಾಗೂ ಆಂಗ್ಲ ಭಾಷೆಯ ಬೆರಳಚ್ಚು ಹಿರಿಯ ದರ್ಜೆ (ಸೀನಿಯರ್ ಗ್ರೇಡ್) ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರ್ಯಾಕ್ಟೀಸ್ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**ಆಯ್ಕೆಯ ವಿಧಾನಃ**

1. ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳು 2007 ಹಾಗೂ 2021ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.
2. ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಉಕ್ತಲೇಖನವನ್ನು ಕೊಟ್ಟು ಬೆರಳಚ್ಚು ಯಂತ್ರ/ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು.

## 2. ಬೆರಳಚ್ಚುಗಾರರು(Typists):- ಹುದ್ದೆಗಳ ಸಂಖ್ಯೆ – 6

**ವೇತನ** ಶ್ರೇಣಿ: 21400-500-22400-550-24600-600-27000-650-29600-750-32600- 850-36000-950-39800-1100-42000

**ಹುದ್ದೆಗಳ ವರ್ಗೀಕರಣ:-**

| ವರ್ಗ | ಇತರೆ | ಗ್ರಾಮೀಣ | ಮಹಿಳೆ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| ಸಾ. ಅ. | 1 | 1 | 1 | -- | -- | -- | -- | -- | 3 |
| ಪ್ರವರ್ಗ-I | 1 | -- | -- | -- | -- | -- | -- | -- | 1 |
| ಪ್ರವರ್ಗ- II ಎ | -- | -- | -- | -- | -- | -- | -- | -- | -- |
| ಪ್ರವರ್ಗ- II ಬಿ | -- | -- | -- | -- | -- | -- | -- | -- | -- |
| ಪ್ರವರ್ಗ- IIIಎ | -- | -- | -- | -- | -- | -- | -- | -- | -- |
| ಪ್ರವರ್ಗ-III ಬಿ | -- | -- | -- | -- | -- | -- | -- | -- | -- |
| ಪ.ಜಾ. | 1 | -- | -- | -- | -- | -- | -- | -- | 1 |
| ಪ. ಪಂ. | 1 | -- | -- | -- | -- | -- | -- | -- | 1 |
| ಒಟ್ಟು | **4** | **1** | **1** | **--** | **--** | **--** | **--** | **--** | **6** |

**ಶೈಕ್ಷಣಿಕ ವಿದ್ಯಾರ್ಹತೆ:**

(ಎ) ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ವರ್ಷದ ಪದವಿ ಪೂರ್ವ ಶಿಕ್ಷಣ ಕೋರ್ಸಿನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರ್ಯಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (Senior Grade) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

**ಆಯ್ಕೆಯ ವಿಧಾನ:**

1. ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳು 2007 ಹಾಗೂ 2021ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.
2. ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಬೆರಳಚ್ಚು ಯಂತ್ರ/ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು.

## 3. ಬೆರಳಚ್ಚು-ನಕಲುಗಾರರು(Typist-Copyists):- ಹುದ್ದೆಗಳ ಸಂಖ್ಯೆ – 2

**ವೇತನ** ಶ್ರೇಣಿ: 21400-500-22400-550-24600-600-27000-650-29600-750-32600- 850-36000-950-39800-1100-42000

**ಹುದ್ದೆಗಳ ವರ್ಗೀಕರಣ:-**

| ವರ್ಗ | ಇತರೆ | ಗ್ರಾಮೀಣ | ಮಹಿಳೆ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| ಸಾ. ಅ. | 1 | -- | -- | -- | -- | -- | -- | -- | 1 |
| ಪ್ರವರ್ಗ-I | -- | -- | -- | -- | -- | -- | -- | -- | -- |
| ಪ್ರವರ್ಗ- II ಎ | -- | -- | -- | -- | -- | -- | -- | -- | -- |
| ಪ್ರವರ್ಗ- II ಬಿ | -- | -- | -- | -- | -- | -- | -- | -- | -- |
| ಪ್ರವರ್ಗ- IIIಎ | -- | -- | -- | -- | -- | -- | -- | -- | -- |
| ಪ್ರವರ್ಗ-III ಬಿ | -- | -- | -- | -- | -- | -- | -- | -- | -- |
| ಪ.ಜಾ. | 1 | -- | -- | -- | -- | -- | -- | -- | 1 |
| ಪ. ಪಂ. | -- | -- | -- | -- | -- | -- | -- | -- | -- |
| ಒಟ್ಟು | **2** | **--** | **--** | **--** | **--** | **--** | **--** | **--** | **2** |

**ಶೈಕ್ಷಣಿಕ ವಿದ್ಯಾರ್ಹತೆ:**

(ಎ) ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ವರ್ಷದ ಪದವಿ ಪೂರ್ವ ಶಿಕ್ಷಣ ಕೋರ್ಸಿನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರ್ಯಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಬೆರಳಚ್ಚು ಕಿರಿಯ ದರ್ಜೆ (Junior Grade) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

**ಆಯ್ಕೆಯ ವಿಧಾನ:**

1. ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು) (ತಿದ್ದುಪಡಿ) ನೇಮಕಾತಿ ನಿಯಮಗಳು 2007 ಹಾಗೂ 2021ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2. ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಬೆರಳಚ್ಚು ಯಂತ್ರ/ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆ ನಡೆಸಲಾಗುವುದು.

**ಜವಾನ(Peons) : ಹುದ್ದೆಗಳ ಸಂಖ್ಯೆ - 36**

**ವೇತನ ಶ್ರೇಣಿ: 17000-400-18600-450-20400-500-22400-550-24600-600-27000-650-28950**

**ಹುದ್ದೆಗಳ ವರ್ಗೀಕರಣಃ-**

| ವರ್ಗ | ಇತರೆ | ಗ್ರಾಮೀಣ | ಮಹಿಳೆ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|---|
| ಸಾ. ಅ. | 2 | 5 | 6 | 1 | 1* | 1 | -- | -- | 16 |
| ಪ್ರವರ್ಗ-I | 1 | -- | 1 | -- | -- | -- | -- | -- | 2 |
| ಪ್ರವರ್ಗ- II ಎ | 1 | 1 | 2 | -- | 1* | -- | -- | -- | 5 |
| ಪ್ರವರ್ಗ- II ಬಿ | 1 | -- | 1 | -- | -- | -- | -- | -- | 2 |
| ಪ್ರವರ್ಗ- IIIಎ | 1 | -- | -- | -- | -- | -- | -- | -- | 1 |
| ಪ್ರವರ್ಗ-III ಬಿ | 1 | -- | -- | -- | -- | -- | -- | -- | 1 |
| ಪ.ಜಾ. | 1 | 2 | 2 | -- | 1* | -- | -- | -- | 6 |
| ಪ. ಪಂ. | 1 | 1 | 1 | -- | -- | -- | -- | -- | 3 |
| ಒಟ್ಟು | **9** | **9** | **13** | **1** | **3** | **1** | **--** | **--** | **36** |

*** ಚಿಹ್ನೆ ತೋರಿಸಿರುವ ಹುದ್ದೆಗಳು ದೃಷ್ಟಿ ಮಾಂದ್ಯ (Low vision) ಅಂಗವಿಕಲ ಅಭ್ಯರ್ಥಿಗಳಿಗೆ ಮಾತ್ರ ಮೀಸಲಾಗಿದೆ.**

**ಶೈಕ್ಷಣಿಕ ವಿದ್ಯಾರ್ಹತೆಃ**

1. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.
2. ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ತಿಳಿದಿರಬೇಕು.

**ಆಯ್ಕೆಯ ವಿಧಾನಃ**

**(ಅ)** ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ ನಿಯಮಗಳು 2007 ಹಾಗೂ 2021ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

**(ಆ)** ಜವಾನ ಹುದ್ದೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು (1ಃ10ರ ಅನುಪಾತದಲ್ಲಿ) ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**10ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (Grade), ಅದನ್ನು ಅಂಕಗಳಾಗಿ ಪರಿವರ್ತಿಸಿ, ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರಬೇಕು.**

A) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ

ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

B) ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಅಂಗವಿಕಲ ಅಭ್ಯರ್ಥಿಗಳು (ದೃಷ್ಟಿ ಮಾಂದ್ಯ) ಲಭ್ಯವಾಗದಿದ್ದಲ್ಲಿ ಆ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

**<u>ವಯೋಮಿತಿ</u> :**

1. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ವಯೋಮಿತಿ ಹೊಂದಿರಬೇಕು ಹಾಗೂ ಈ ಕೆಳಗೆ ತಿಳಿಸಿರುವಂತೆ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.
2. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-I ರ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಠ 40 ವರ್ಷ
3. ಪ್ರವರ್ಗ 2-ಎ, 2-ಬಿ, 3-ಎ ಮತ್ತು 3-ಬಿ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಠ 38 ವರ್ಷ.
4. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 35 ವರ್ಷ.

**<u>ವಯೋಮಿತಿ ಸಡಿಲಿಕೆ</u> :**

1. ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ.
2. ವಿಧವೆಯರು, ಜೀತಕಾರ್ಮಿಕರು ಮತ್ತು ಅಂಗವಿಕಲರು ಸಂಬಂಧಿಸಿದ ಪ್ರಾಧಿಕಾರಗಳು ನೀಡುವ ಪ್ರಮಾಣ ಪತ್ರ ಹೊಂದಿದ್ದಲ್ಲಿ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ನೀಡಲಾಗುವುದು. 'ಜೀತ ಕಾರ್ಮಿಕರು' ಎಂದರೆ Bonded Labour System (Abolition) Act 1976 (Central Act 19 of 1976) ಅಥವಾ Karnataka Bonded Labour System (Abolition) Ordinance 1975 ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ಧತಿಯಿಂದ ಮುಕ್ತನಾದ ವ್ಯಕ್ತಿ.
3. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.
4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೊ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6. ಅಭ್ಯರ್ಥಿಗಳು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ ವರ್ಷಗಳು.

**ಅರ್ಜಿ ಸಲ್ಲಿಸುವ ವಿಧಾನಃ**

ನಿಗದಿತ ಅರ್ಜಿ ಶುಲ್ಕ, ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ

| | |
|---|---|
| ಸಾಮಾನ್ಯ ವರ್ಗ, 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 200-00 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ- I ಹಾಗೂ ಎಲ್ಲಾ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ. |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **https://dk.dcourts.gov.in/notice-category/recruitments** ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ **online payment through net banking/credit card/debit card/UPI** ಸೌಲಭ್ಯದ ಮೂಲಕ ಪಾವತಿ ಮಾಡಬಹುದಾಗಿದೆ.

**ಇದನ್ನು ಹೊರತುಪಡಿಸಿ ಯಾವುದೇ, ಚಲನ್ಃ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
3. ಅರ್ಹ ಅಭ್ಯರ್ಥಿಗಳಿಗೆ SMS / E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ /ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.
4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   - ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.
   - ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು(ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು.) ಅಪ್‌ಲೋಡ್ ಮಾಡಬೇಕು.

**5.** ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಶುಲ್ಕ ವಿನಾಯಿತಿ ಅಭ್ಯರ್ಥಿಗಳಿಗೆ ಅನ್ವಯಿಸುವುದಿಲ್ಲ.

**6.** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

**7.** ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು, ಸಲ್ಲಿಸಲು ದಿನಾಂಕಃ **05.12.2023** ರಾತ್ರಿ 11.59 ರ ವರೆಗೆ ಅವಕಾಶವಿರುತ್ತದೆ.

**8.** ಸೇವಾ ನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ "ನಿರಾಕ್ಷೇಪಣಾ ಪ್ರಮಾಣಪತ್ರ" ವನ್ನು ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.

9. **ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

**ಇತರ ಸೂಚನೆಗಳುಃ**

**1.** ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು.

**2.** ಅರ್ಹತಾ ಪರೀಕ್ಷೆಯ/ ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಹತ್ತನೇ ತರಗತಿಯ ಪರೀಕ್ಷಾ ಪ್ರಮಾಣಪತ್ರ) ಜಾತಿ ಪ್ರಮಾಣ ಪತ್ರ, ಗ್ರಾಮೀಣ, ಮಾಜಿ ಸೈನಿಕರು, ಅಂ.ಅ., ಕ.ಮಾ.ಅ. ಸಂಬಂಧಿಸಿದಂತೆ ಕ್ಲೇಮು ಮಾಡಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡು ಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.

3. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ ಪ್ರವರ್ಗ-I ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.

4. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/96/ಸೇನೆನಿ/2005, ದಿನಾಂಕ 10-08-2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ

ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

5. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಹೊಂದಿರಬೇಕು.
6. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು.
7. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕಃ 19-11-2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮಾನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.
8. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನನಿ/2001, ದಿನಾಂಕ 27-07-2001 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.
9. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಜವಾನ ಹುದ್ದೆಗೆ ಯಾವುದೇ ಇಲಾಖಾ ಪರೀಕ್ಷೆಗಳು ಇರುವುದಿಲ್ಲ.
10. ಶೀಘ್ರಲಿಪಿಗಾರರ, ಬೆರಳಚ್ಚುಗಾರರು ಮತ್ತು ಬೆರಳಚ್ಚು-ನಕಲುಗಾರರು ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾದ ನಂತರ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪಾಸು ಮಾಡತಕ್ಕದ್ದು.
11. ಶೀಘ್ರಲಿಪಿಗಾರರ, ಬೆರಳಚ್ಚುಗಾರರು ಮತ್ತು ಬೆರಳಚ್ಚು-ನಕಲುಗಾರರು ಹುದ್ದೆಗಳಿಗೆ ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ - ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.
12. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನದ ಬಗ್ಗೆ ಮಾಹಿತಿ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.
13. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.
14. **ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.**

ಸಹಿ/-

RAVINDRA M JOSHI — Digitally signed by RAVINDRA M JOSHI Date: 2023.10.26 16:53:35 +0530

(ರವೀಂದ್ರ ಎಂ ಜೋಶಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ. ಮಂಗಳೂರು.

<u>ಪ್ರತಿಯನ್ನು ಮಾನ್ಯ ಮಹಾವಿಲೇಖಾನಧಿಕಾರಿ, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ರವರಿಗೆ ಮುಖಪತ್ರದೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.</u>

<u>ಪ್ರತಿಯನ್ನುಃ</u>

1. ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ,

ಬಳ್ಳಾರಿ, ಬೀದರ್, ವಿಜಯಪುರ, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಗುಲ್ಬರ್ಗಾ, ಹಾಸನ, ಹಾವೇರಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.

2. ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಪೀಠಾಸೀನಾಧಿಕಾರಿಗಳಿಗೆ (ಸೂಚನಾ ಫಲಕದಲ್ಲಿ ಪ್ರಕಟಿಸಲು).
3. ಜಿಲ್ಲಾಧಿಕಾರಿಯವರು, ದ.ಕ. ಮಂಗಳೂರು.
4. ಆಯುಕ್ತರು, ಮಂಗಳೂರು ಮಹಾನಗರಪಾಲಿಕೆ, ಮಂಗಳೂರು.
5. ಸರ್ಕಾರಿ ಅಭಿಯೋಜಕರು, ಮಂಗಳೂರು.
6. ವಾರ್ತಾಧಿಕಾರಿ, ವಾರ್ತಾ ಇಲಾಖೆ, ಮಂಗಳೂರು, ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
7. ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿ.
8. ತಹಶೀಲ್ದಾರರು, ಮಂಗಳೂರು.
9. ಅಧ್ಯಕ್ಷರು, ಬಾರ್ ಅಸೋಸಿಯೇಶನ್, ಮಂಗಳೂರು/ಬಂಟ್ವಾಳ/ಪುತ್ತೂರು/ಬೆಳ್ತಂಗಡಿ/ಮೂಡಬಿದ್ರೆ/ಸುಳ್ಯ
10. ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.
11. ಆಯುಕ್ತರು ಮತ್ತು ವಾರ್ತಾ ಇಲಾಖೆ, ನಂ. 17, ಭಗವಾನ್ ಮಹಾವೀರ ಜೈನ್ (ಇನ್‌ಫಂಟ್ರಿ) ರಸ್ತೆ, ಬೆಂಗಳೂರು - 560 001 - ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
12. ಸಾಫ್ಟ್ ವೇರ್ ಟೆಕ್ನೀಷಿಯನ್, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದ.ಕ., ಮಂಗಳೂರು ಇ-ಗೆಜೆಟ್‌ಗೆ ಪ್ರಕಟಿಸಲು ಹಾಗೂ ದ.ಕ. ಮಂಗಳೂರು ಘಟಕದ ಜಾಲತಾಣದಲ್ಲಿ ಪ್ರಕಟಿಸಲು.
12. ಈ ನ್ಯಾಯಾಲಯದ ಸೂಚನಾಫಲಕಕ್ಕಾಗಿ.